**ಕರ್ನಾಟಕ ವಿಧಾನ ಪರಿಷತ್ತು**

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : **745 (778)**
ಸದಸ್ಯರ ಹೆಸರು : ಶ್ರೀ ಶಶೀಲ್ ಜಿ ನಮೋಶಿ (ಶಿಕ್ಷಕರ ಕ್ಷೇತ್ರ)
ಉತ್ತರಿಸುವ ದಿನಾಂಕ : 16.12.2024
ಉತ್ತರಿಸುವ ಸಚಿವರು : ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಸಚಿವರು

| ಕ್ರ ಸಂ | ಪ್ರಶ್ನೆ | ಉತ್ತರ |
|---|---|---|
| (ಅ) | ರಾಜ್ಯದಲ್ಲಿ ಸುಮಾರು 12 ವರ್ಷಗಳಿಂದ ಸರ್ಕಾರಿ ಪ್ರಾಥಮಿಕ/ ಪ್ರೌಢ ಶಾಲೆಗಳಲ್ಲಿ ದೈಹಿಕ ಶಿಕ್ಷಕರ ನೇಮಕಾತಿಗಳನ್ನು ಮಾಡಿಕೊಳ್ಳದಿರುವುದು ನಿಜವೇ; ಹಾಗಿದ್ದರೆ, ಇದಕ್ಕೆ ಇರುವ ಅಡೆತಡೆಗಳೇನು; | **ಸರ್ಕಾರಿ ಪ್ರಾಥಮಿಕ ಶಾಲೆಗಳಿಗೆ ಸಂಬಂಧಿಸಿದಂತೆ:-**<br>ರಾಜ್ಯದ ಸರ್ಕಾರಿ ಪ್ರಾಥಮಿಕ ಶಾಲೆಗಳಿಗೆ 12 ವರ್ಷಗಳಿಂದ ದೈಹಿಕ ಶಿಕ್ಷಕರ ಹುದ್ದೆಗಳನ್ನು ಭರ್ತಿ ಮಾಡಿಕೊಂಡಿರುವುದಿಲ್ಲ.. ರಾಜ್ಯದ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆಗಳಿಗೆ ದೈಹಿಕ ಶಿಕ್ಷಣ ಶಿಕ್ಷಕರ ಗ್ರೇಡ್-2 ವೃಂದದ 6772 ಹುದ್ದೆಗಳು ಮಂಜೂರಾಗಿವೆ. ಈ ಹುದ್ದೆಗಳ ಪೈಕಿ ಸರ್ಕಾರದ ಆದೇಶ ಸಂಖ್ಯೆ ಇಪಿ 230 ಪಿಬಿಎಸ್ 2024 ದಿನಾಂಕ 07.10.2024 ರನ್ವಯ ಕಲ್ಯಾಣ ಕರ್ನಾಟಕ 07 ಜಿಲ್ಲೆಗಳ ಖಾಲಿ ಇರುವ 380 ದೈಹಿಕ ಶಿಕ್ಷಣ ಶಿಕ್ಷಕರು ಗ್ರೇಡ್ ಹುದ್ದೆಗಳನ್ನು ನೇರ ನೇಮಕಾತಿ ಮೂಲಕ ಭರ್ತಿ ಮಾಡಲು ಅನುಮತಿ ನೀಡಲಾಗಿದೆ. ಪ್ರಸ್ತುತ ವೃಂದ ಮತ್ತು ನೇಮಕಾತಿ ನಿಯಮಗಳ ಪರಿಷ್ಕರಣೆ ತಿದ್ದುಪಡಿ ಪ್ರಕ್ರಿಯೆ ಜಾರಿಯಲ್ಲಿರುತ್ತದೆ.<br>**ಸರ್ಕಾರಿ ಪ್ರೌಢಶಾಲೆಗಳಿಗೆ ಸಂಬಂಧಿಸಿದಂತೆ:-**<br>2014-15 ನೇ ಸಾಲಿನಲ್ಲಿ ಸರ್ಕಾರಿ ಪ್ರೌಢಶಾಲಾ ದೈಹಿಕ ಶಿಕ್ಷಣ ಶಿಕ್ಷಕರ ಒಟ್ಟು 148 ಹುದ್ದೆಗಳನ್ನು ಭರ್ತಿ ಮಾಡಲಾಗಿದೆ. |
| (ಆ) | ಸದ್ಯ ಕರ್ತವ್ಯ ನಿರ್ವಹಿಸುತ್ತಿರುವ ದೈಹಿಕ ಶಿಕ್ಷಕರುಗಳ ಸಂಖ್ಯೆ ಎಷ್ಟು; ಪ್ರಾಥಮಿಕ/ ಪ್ರೌಢ ಶಾಲೆಗಳ ಶಿಕ್ಷಕರುಗಳ ಸಂಖ್ಯೆ ಎಷ್ಟು; (ಮಾಹಿತಿ ನೀಡುವುದು ) | **ಸರ್ಕಾರಿ ಪ್ರಾಥಮಿಕ ಶಾಲೆಗಳಿಗೆ ಸಂಬಂಧಿಸಿದಂತೆ:-**<br>**1.** ರಾಜ್ಯದ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ದೈಹಿಕ ಶಿಕ್ಷಣ ಶಿಕ್ಷಕರ ಸಂಖ್ಯೆ – 3666<br>**2.** ರಾಜ್ಯದ ಸರ್ಕಾರಿ ಪ್ರಾಥಮಿಕ ಶಾಲೆಗಳಲ್ಲಿ ಮಂಜೂರಾದ ಹುದ್ದೆಗಳ ಸಂಖ್ಯೆ: 188531<br>**3.** ರಾಜ್ಯದ ಸರ್ಕಾರಿ ಪ್ರಾಥಮಿಕ ಶಾಲೆಗಳಲ್ಲಿ ಕಾರ್ಯನಿರತ ಹುದ್ದೆಗಳ ಸಂಖ್ಯೆ: 138464<br>**4.** ರಾಜ್ಯದ ಸರ್ಕಾರಿ ಪ್ರಾಥಮಿಕ ಶಾಲೆಗಳಲ್ಲಿ ಖಾಲಿಯಿರುವ ಎಲ್ಲಾ ವೃಂದದ ಹುದ್ದೆಗಳ ಸಂಖ್ಯೆ: 50067<br>**ಸರ್ಕಾರಿ ಪ್ರೌಢಶಾಲೆಗಳಿಗೆ ಸಂಬಂಧಿಸಿದಂತೆ:-**<br>**1.** ರಾಜ್ಯದ ಸರ್ಕಾರಿ ಪ್ರೌಢಶಾಲೆಗಳಲ್ಲಿ ದೈಹಿಕ ಶಿಕ್ಷಣ ಶಿಕ್ಷಕರ ಕಾರ್ಯನಿರತ ಹುದ್ದೆಗಳ ಸಂಖ್ಯೆ: 3433<br>**2.** ರಾಜ್ಯದ ಸರ್ಕಾರಿ ಪ್ರೌಢಶಾಲೆಗಳಲ್ಲಿ ಶಿಕ್ಷಕರ ಮಂಜೂರಾದ ಹುದ್ದೆಗಳ ಸಂಖ್ಯೆ: 44406 |

| | | |
|---|---|---|
| | | **3.** ರಾಜ್ಯದ ಸರ್ಕಾರಿ ಪ್ರೌಢಶಾಲೆಗಳಲ್ಲಿ ಶಿಕ್ಷಕರ ಕಾರ್ಯನಿರತ ಹುದ್ದೆಗಳ ಸಂಖ್ಯೆ: 32610<br>**4.** ರಾಜ್ಯದ ಸರ್ಕಾರಿ ಪ್ರೌಢಶಾಲೆಗಳಲ್ಲಿ ಶಿಕ್ಷಕರ ಖಾಲಿಯಿರುವ ಹುದ್ದೆಗಳ ಸಂಖ್ಯೆ: 11796 |
| **(ಇ)** | ಸರ್ಕಾರಿ ಪದವಿ ಪೂರ್ವ ಕಾಲೇಜುಗಳಲ್ಲಿನ ದೈಹಿಕ ಶಿಕ್ಷಣ ಉಪನ್ಯಾಸಕರುಗಳ ಸಂಖ್ಯೆ ಎಷ್ಟು; ವಿವರವಾದ ತಾಲ್ಲೂಕುವಾರು ಮಾಹಿತಿ ನೀಡುವುದು; | ಶಾಲಾ ಶಿಕ್ಷಣ ಇಲಾಖೆ (ಪದವಿಪೂರ್ವ) ವೃಂದ ಮತ್ತು ನೇಮಕಾತಿ ನಿಯಮಗಳನ್ವಯ ಒಟ್ಟು 20 ದೈಹಿಕ ಶಿಕ್ಷಣ ಉಪನ್ಯಾಸಕರ ಹುದ್ದೆಗಳಿಗೆ ಮಂಜೂರಾತಿ ನೀಡಲಾಗಿದೆ. ಸದರಿ ಹುದ್ದೆಗಳ ಪೈಕಿ 10 ದೈಹಿಕ ಶಿಕ್ಷಣ ಉಪನ್ಯಾಸಕರ ಹುದ್ದೆಗಳು ನೇರ ನೇಮಕಾತಿಗೆ ಮೀಸಲಾಗಿದ್ದು, ಈ ಹುದ್ದೆಗಳ ಭರ್ತಿಗೆ ಕೇಂದ್ರೀಕೃತ ದಾಖಲಾತಿ ಘಟಕದ ವತಿಯಿಂದ ಆಯ್ಕೆ ಪ್ರಕ್ರಿಯೆಗೆ ಕ್ರಮವಹಿಸಲಾಗಿರುತ್ತದೆ. ಇನ್ನುಳಿದ 10 ದೈಹಿಕ ಶಿಕ್ಷಣ ಉಪನ್ಯಾಸಕರ ಹುದ್ದೆಗಳು ಬಡ್ತಿಗೆ ಮೀಸಲಾಗಿದ್ದು, ಈ ಹುದ್ದೆಗಳಿಗೆ ಶಾಲಾ ಶಿಕ್ಷಣ ಇಲಾಖೆಯ ಪ್ರೌಢಶಾಲಾ ಅರ್ಹ ಗ್ರೇಡ್-1 ದೈಹಿಕ ಶಿಕ್ಷಣ ಶಿಕ್ಷಕರಿಗೆ ದಿನಾಂಕ:06/12/2024 ರಂದು ಬಡ್ತಿ ನೀಡಲಾಗಿರುತ್ತದೆ. |
| **(ಈ)** | ಈ ಸರ್ಕಾರಿ ಶಾಲೆಗಳಲ್ಲಿ ಮಂಜೂರಾಗಿ ನಿವೃತ್ತಿ ಹೊಂದಿದೆ ದೈಹಿಕ ಶಿಕ್ಷಕರ ಹುದ್ದೆಗಳು ಭರ್ತಿ ಮಾಡಲು ಸರ್ಕಾರ ಚಿಂತನೆ ನಡೆಸಿದೆಯೇ; ಹಾಗಿದ್ದಲ್ಲಿ ಈ ಬಗ್ಗೆ ಯಾವ ರೀತಿಯ ಕ್ರಮ ಕೈಗೊಳ್ಳಲಾಗಿದೆ; | **ಪ್ರಾಥಮಿಕ ಶಾಲೆಗಳಿಗೆ ಸಂಬಂಧಿಸಿದಂತೆ :-**<br><br>ರಾಜ್ಯದ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆಗಳಿಗೆ ದೈಹಿಕ ಶಿಕ್ಷಣ ಶಿಕ್ಷಕರ ಗ್ರೇಡ್-2 ವೃಂದದ 6772 ಹುದ್ದೆಗಳು ಮಂಜೂರಾಗಿವೆ. ಈ ಹುದ್ದೆಗಳ ಪೈಕಿ ಸರ್ಕಾರದ ಆದೇಶ ಸಂಖ್ಯೆ ಇಪಿ 230 ಪಿಬಿಎಸ್2024 ದಿನಾಂಕ 07.10.2024 ರನ್ವಯ ಕಲ್ಯಾಣ ಕರ್ನಾಟಕ 07 ಜಿಲ್ಲೆಗಳ ಖಾಲಿ ಇರುವ 380 ದೈಹಿಕ ಶಿಕ್ಷಣ ಶಿಕ್ಷಕರು ಗ್ರೇಡ್ ಹುದ್ದೆಗಳನ್ನು ನೇರ ನೇಮಕಾತಿ ಮೂಲಕ ಭರ್ತಿ ಮಾಡಲು ಅನುಮತಿ ನೀಡಲಾಗಿದೆ. ಪ್ರಸ್ತುತ ವೃಂದ ಮತ್ತು ನೇಮಕಾತಿ ನಿಯಮಗಳ ಪರಿಷ್ಕರಣೆ ತಿದ್ದುಪಡಿ ಪ್ರಕ್ರಿಯೆ ಜಾರಿಯಲ್ಲಿರುತ್ತದೆ. ಸದರಿ ಪ್ರಕ್ರಿಯೆ ಅಂತಿಮವಾದ ನಂತರ ನಿಯಮಾನುಸಾರ ಕ್ರಮವಹಿಸಲಾಗುವುದು.<br>ಸರ್ಕಾರದ ಪತ್ರ ಸಂಖ್ಯೆ: ಇಪಿ 134 ಪಿಬಿಎಸ್ 2022 ದಿನಾಂಕ: 25-06-2024ರಲ್ಲಿ ಸರ್ಕಾರಿ ಪ್ರಾಥಮಿಕ ಶಾಲೆಗಳಲ್ಲಿ ಖಾಲಿ ಇರುವ ಚಿತ್ರಕಲೆ ಮತ್ತು ಸಂಗೀತ ಶಿಕ್ಷಕರ ಖಾಲಿ ಹುದ್ದೆಗಳನ್ನು ಒಳಗೊಂಡಂತೆ ಭರ್ತಿ ಮಾಡಲು ಪ್ರಸ್ತುತ ಕಾರ್ಯ ನಿರ್ವಹಿಸುತ್ತಿರುವ ಶಿಕ್ಷಕರಲ್ಲಿಯೇ ಕ್ರೀಡೆ, ಚಿತ್ರಕಲೆ ಮತ್ತು ಸಂಗೀತಕ್ಕೆ ಸಂಬಂಧಿಸಿದಂತೆ ಇರುವ ವಿಶೇಷ ಕೌಶಲ್ಯಗಳನ್ನು ಗುರುತಿಸಿ ಅವರಿಂದಲೇ ಕಾರ್ಯ ನಿರ್ವಹಿಸುವಂತೆ ತಿಳಿಸಲಾಗಿದೆ.<br><br>**ಪ್ರೌಢ ಶಾಲೆಗಳಿಗೆ ಸಂಬಂಧಿಸಿದಂತೆ :-**<br><br>ಸರ್ಕಾರದ ಪತ್ರ ಸಂಖ್ಯೆ: ಇಪಿ 14 ಎಲ್‌ಬಿಪಿ 2022, ದಿನಾಂಕ:13/09/2022ರಲ್ಲಿ ರಾಜ್ಯದ ಸರ್ಕಾರಿ ಪ್ರೌಢಶಾಲೆಗಳಲ್ಲಿ ಖಾಲಿಯಿರುವ ವಿವಿಧ ವೃಂದದ ದೈಹಿಕ ಶಿಕ್ಷಣ ಶಿಕ್ಷಕರ 200 ಹುದ್ದೆಗಳು ಸೇರಿ ಒಟ್ಟು 2500 ಶಿಕ್ಷಕರುಗಳ ಹುದ್ದೆಗಳನ್ನು 15000 ಪದವೀಧರ ಪ್ರಾಥಮಿಕ ಶಾಲಾ ನೇಮಕಾತಿಯಲ್ಲಿ ಭರ್ತಿಯಾಗದೇ ಖಾಲಿ ಉಳಿದ ಹುದ್ದೆಗಳಿಗೆ ಹೊಂದಾಣಿಕೆ |

| | | |
|---|---|---|
| | | ಮಾಡಿಕೊಳ್ಳುವ ಷರತ್ತಿಗೆ ಒಳಪಟ್ಟು ನೇರ ನೇಮಕಾತಿ ಮೂಲಕ ಭರ್ತಿ ಮಾಡಲು ಸರ್ಕಾರವು ಅನುಮತಿ ನೀಡಿರುತ್ತದೆ.<br><br>ಆದರೆ ಸದರಿ 15000 ಹುದ್ದೆಗಳಲ್ಲಿ ಪ್ರೌಢಶಾಲಾ ಶಿಕ್ಷಕರುಗಳ ನೇಮಕಾತಿಗೆ 1648 ಹುದ್ದೆಗಳು ಮಾತ್ರ ಉಳಿದಿರುವ ಪ್ರಯುಕ್ತ ಪ್ರಸ್ತುತ ಸಾಲಿನಲ್ಲಿ ಒಟ್ಟು 2500 ಹುದ್ದೆಗಳನ್ನು ಭರ್ತಿ ಮಾಡಲು ಅನುಮತಿ ನೀಡುವ ಪ್ರಸ್ತಾವನೆಯ ಬಗ್ಗೆ ಆಯುಕ್ತರು, ಶಾಲಾ ಶಿಕ್ಷಣ ಇಲಾಖೆ, ಬೆಂಗಳೂರು ಇವರ ಪತ್ರ ಸಂಖ್ಯೆ: ಸಿ4(1)ಸ.ಪ್ರೌ.ಶಾ.ಶಿನೇ/46/2021-22/ಇ-1407683, ದಿನಾಂಕ: 22/05/2024ರ ಕಡತವನ್ನು ಆರ್ಥಿಕ ಇಲಾಖೆಗೆ ಕಳುಹಿಸಲಾಗಿದ್ದು, ಆರ್ಥಿಕ ಇಲಾಖೆಯೊಂದಿಗೆ ಸಮಾಲೋಚಿಸಲಾಗುತ್ತಿದೆ.<br><br>ಸರ್ಕಾರದ ಆದೇಶ ಸಂಖ್ಯೆ: ಇಪಿ 230 ಪಿಬಿಎಸ್ 2024 ದಿನಾಂಕ:07.10.2024 ರಲ್ಲಿ ಕಲ್ಯಾಣ ಕರ್ನಾಟಕ ಪ್ರದೇಶದ 07 ಜಿಲ್ಲೆಗಳಲ್ಲಿ ಖಾಲಿಯಿರುವ ಪ್ರೌಢ ಶಾಲಾ ಸಹ ಶಿಕ್ಷಕರ ಒಟ್ಟು ಹುದ್ದೆಗಳಲ್ಲಿ 385 ಹುದ್ದೆಗಳನ್ನು ಭರ್ತಿ ಮಾಡಲು ಅನುಮತಿ ನೀಡಲಾಗಿರುತ್ತದೆ.<br><br>ಆದರೆ ಸುತ್ತೋಲೆ ಸಂಖ್ಯೆ:ಸಿಆಸುಇ 388 ಸೇನೆನಿ 2024 ದಿನಾಂಕ: 25.11.2024 ರನ್ವಯ ದಿನಾಂಕ:28.10.2024 ರಂದು ನಡೆದ ಸಚಿವ ಸಂಪುಟ ಸಭೆಯಲ್ಲಿ ತೆಗೆದುಕೊಂಡ ನಿರ್ಣಯದಂತೆ ರಾಜ್ಯ ಸಿವಿಲ್ ಸೇವೆಗಳಲ್ಲಿನ ಮೀಸಲಾತಿ ಅನ್ವಯವಾಗುವ ವೃಂದಗಳಲ್ಲಿನ ಹುದ್ದೆಗಳಿಗೆ ನೇರ ನೇಮಕಾತಿ ಮಾಡಲು ಹೊಸದಾಗಿ ಯಾವುದೇ ಅಧಿಸೂಚನೆಯನ್ನು ತಕ್ಷಣದಿಂದ ಜಾರಿಗೆ ಬರುವಂತೆ ಮುಂದಿನ ಆದೇಶದವರೆಗೂ ಹೊರಡಿಸಬಾರದೆಂದು ಸೂಚಿಸಲಾಗಿದೆ.<br><br>ಪ್ರಸ್ತುತ ಸರ್ಕಾರಿ ಪ್ರಾಥಮಿಕ ಮತ್ತು ಪ್ರೌಢಶಾಲೆಗಳಲ್ಲಿ ಖಾಲಿಯಿರುವ ಶಿಕ್ಷಕರ ಹುದ್ದೆಗಳಿಗೆ ಎದುರಾಗಿ ವಿದ್ಯಾರ್ಥಿಗಳ ಶೈಕ್ಷಣಿಕ ಹಿತದೃಷ್ಟಿಯಿಂದ ಖಾಯಂ ಹುದ್ದೆ ಭರ್ತಿ ಆಗುವವರೆಗೂ ಅಥವಾ ಶೈಕ್ಷಣಿಕ ಸಾಲಿನ ಅಂತ್ಯದವರೆಗೂ ತಾತ್ಕಾಲಿಕವಾಗಿ ಅತಿಥಿ ಶಿಕ್ಷಕರನ್ನು ನೇಮಕ ಮಾಡಿಕೊಂಡು ಶಿಕ್ಷಕರ ಕೊರತೆಯನ್ನು ನೀಗಿಸಲಾಗಿದೆ. |
| **(ಉ)** | ಖಾಸಗಿ ಅನುದಾನಿತ ಪದವಿ ಪೂರ್ವ ಕಾಲೇಜುಗಳಲ್ಲಿ ನಿವೃತ್ತಿಯಿಂದ ತೆರವಾಗಿರುವ ದೈಹಿಕ ಶಿಕ್ಷಣ ಉಪನ್ಯಾಸಕರನ್ನು ನೇಮಕಾತಿ ಮಾಡಿಕೊಳ್ಳದಂತೆ ಆರ್ಥಿಕ ಇಲಾಖೆಯಿಂದ ಟಿಪ್ಪಣಿ ರೂಪದಲ್ಲಿ ಆದೇಶ ಬಂದಿದೆಯೇ; ಈ ಕುರಿತು ಸರ್ಕಾರ ಕೈಗೊಂಡ ಕ್ರಮಗಳೇನು?(ಸಂಪೂರ್ಣ ವಿವರ ನೀಡುವುದು) | ಈ ರೀತಿ ಯಾವುದೇ ಆದೇಶ ಬಂದಿರುವುದಿಲ್ಲ. |

ಸಂಖ್ಯೆ: ಇಪಿ 304 ಎಲ್‌ಬಿಪಿ 2024

**(ಎಸ್. ಮಧು ಬಂಗಾರಪ್ಪ)**
ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಸಚಿವರು